# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1093 (1186)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : ನೂತನ ಮರಳು ನೀತಿ ಕುರಿತು

(ಅ) ಪಟ್ಟಾ ಭೂಮಿ, ಹಳ್ಳ, ತೊರೆ, ಕೆರೆ, ನದಿ, ಪ್ರದೇಶಗಳಲ್ಲಿ ಮರಳು ತೆಗೆಯಲು ಅವಕಾಶ ಕೊಡುವ ಕರ್ನಾಟಕ ನೂತನ ಮರಳು ನೀತಿ-2020 ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ನೂತನ ಮರಳು ನೀತಿ ಜಾರಿಗೆ ತಂದಿರುವ ಉದ್ದೇಶಗಳೇನು; (ವಿವರ ನೀಡುವುದು)

(ಆ) ಈ ಹೊಸ ನೀತಿಯಡಿ ಹಾಸನ ಜಿಲ್ಲೆಯಲ್ಲಿ ಮರಳು ತೆಗೆಯಲು ಗುರುತಿಸಿರುವ ಮರಳು ನಿಕ್ಷೇಪಗಳು ಯಾವುವು; ಈ ನಿಕ್ಷೇಪಗಳಲ್ಲಿ ಲಭ್ಯವಿರುವ ಮರಳಿನ ಪ್ರಮಾಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಮರಳು ನೀತಿಯಿಂದ ಸರ್ಕಾರಕ್ಕೆ ಪ್ರಸಕ್ತ ಸಾಲಿನಲ್ಲಿ ಸಂದಾಯವಾಗಿರುವ ಆದಾಯವೆಷ್ಟು; ಈ ನೀತಿಯಡಿ ಪ್ರತಿ ಮೆಟ್ರಿಕ್‌ಟನ್ ಮರಳಿಗೆ ನಿಗದಿಪಡಿಸಿರುವ ದರವೆಷ್ಟು; ದರ ನಿಗದಿಪಡಿಸಲು ಅನುಸರಿಸುವ ಮಾನದಂಡಗಳೇನು; (ವಿವರ ನೀಡುವುದು)

(ಈ) ಈ ನೀತಿಯಡಿ ಸ್ಥಳೀಯವಾಗಿ ಜನತೆಯು ಯಾವ ಯಾವ ಕಾಮಗಾರಿಗಳಿಗೆ ಮರಳನ್ನು ಖರೀದಿಸಲು ಅನುಮತಿ ನೀಡಲಾಗಿದೆ; ಅನುಮತಿಯನ್ನು ಪಡೆಯಲು ಅನುಸರಿಸಬಹುದಾದ ಕ್ರಮಗಳೇನು ? (ವಿವರ ನೀಡುವುದು)